ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 20/09/2019

# ಆಲ್ಕಾ ಲಂಬಾ ಶಾಸಕತ್ವ ಅನರ್ಹ



**ದೆಹಲಿ:** ಆಮ್ ಆದ್ಮಿ ಪಕ್ಷದ ಮಾಜಿ ನಾಯಕಿ ಹಾಗೂ ದೆಹಲಿ ಚಾಂದಿನಿ ಚೌಕ್ ವಿಧಾನಸಭಾ ಕ್ಷೇತ್ರದ ಶಾಸಕಿ ಆಲ್ಕಾ ಲಂಬಾ ಅವರನ್ನು ಶಾಸಕತ್ವದಿಂದ ಅನರ್ಹಗೊಳಿಸಿ ದೆಹಲಿ ವಿಧಾನಸಭೆ ಸ್ಪೀಕರ್ ರಾಮ್ ನಿವಾಸ್ ಗೋಯಲ್ ಅವರು ಗುರುವಾರ ಆದೇಶ ಹೊರಡಿಸಿದ್ದಾರೆ. ಇತ್ತೀಚೆಗಷ್ಟೇ ಆಪ್ ತೊರೆದು ಕಾಂಗ್ರೆಸ್ ಸೇರಿದ ಅಲ್ಕಾ ಲಂಬಾ ಅವರನ್ನು ಪಕ್ಷಾಂತರ ನಿಷೇಧ ಕಾಯ್ದೆ ಅಡಿ ಅನರ್ಹಗೊಳಿಸಬೇಕು ಎಂದು ಆಪ್ ಶಾಸಕ ಸೌರಭ್ ಭಾರದ್ವಾಜ್ ಅವರು ಸ್ಪೀಕರ್‌ಗೆ ದೂರು ನೀಡಿದ್ದರು. ದೂರಿನ ವಿಚಾರಣೆ ನಡೆಸಿದ ಸ್ಪೀಕರ್ ರಾಮ್ ನಿವಾಸ್ ಗೋಯಲ್ ಅವರು, ಲಂಬಾ ಅವರನ್ನು ಅನರ್ಹಗೊಳಿಸಿ ತೀರ್ಪು ನೀಡಿದ್ದಾರೆ. ಇದಕ್ಕೂ ಮುನ್ನ ಪಕ್ಷಾಂತರ ನಿಷೇಧ ಕಾಯ್ದೆ ಅಡಿ ನಾಲ್ವರು ಆಪ್ ಶಾಸಕರನ್ನು ಅನರ್ಹಗೊಳಿಸಲಾಗಿತ್ತು. ತಮ್ಮ ಪಕ್ಷದ ಶಾಸಕರು ಹಾಗೂ ಮುಖ್ಯಸ್ಥ ಅರವಿಂದ ಕೇಜ್ರಿವಾಲ್ ನಡೆ ವಿರುದ್ಧ ಅಸಮಾಧಾನ ಹೊಂದಿ, ಲೋಕಸಭಾ ಚುನಾವಣೆ ವೇಳೆ ಪ್ರಚಾರದಿಂದಲೂ ದೂರ ಉಳಿದಿದ್ದ ಅಲ್ಕಾ ಲಂಬಾ ಅವರು ಇತ್ತೀಚೆಗೆ ಆಮ್ ಆದ್ಮಿ ಪಕ್ಷದ ಪ್ರಾಥಮಿಕ ಸದಸ್ಯತ್ವ ಸ್ಥಾನಕ್ಕೆ ರಾಜೀನಾಮೆ ನೀಡಿ ಕಾಂಗ್ರೆಸ್ ಸೇರಿದ್ದರು.